ದಿನಾಂಕಃ 13-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

<u>ಪಾಟೀ ಸವಾಲು: ಎದುರುದಾರ ಪರ ಶ್ರೀ ವಿವಿಟಿ ವಕೀಲರಿಂದ:</u>

ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಅಪಘಾತದ ಸಮಯದಲ್ಲಿ ನನ್ನ ವಯಸ್ಸು 52 ವರ್ಷ ಇತ್ತು ಎಂದು ಸುಳ್ಳಾಗಿ ಬರೆಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ವಯಸ್ಸು 60 ವರ್ಷ ಇತ್ತು ಎಂದರೆ ಸರಿಯಲ್ಲ. ನನ್ನ ವಯಸ್ಸು ಈಗ 54 ವರ್ಷ ಇರುತ್ತದೆ, ಆ ಬಗ್ಗೆ ದಾಖಲೆ ಸಲ್ಲಿಸಿರುತ್ತೇನೆ. ಅಪಘಾತದ ಸಮಯದಲ್ಲಿ ಮೋಟರ ಸೈಕಲ್ ನಾನೇ ಚಲಾಯಿಸುತ್ತಿದ್ದೇನು. ಸದರಿ ಮೋಟರ ಸೈಕಲ್( ನಂ.ಕೆಎ-48/ಕೆ-007 ನನ್ನ ಹೆಸರಿನಲ್ಲಿ ಇರುತ್ತದೆ. ಅಪಘಾತದಲ್ಲಿ ಸಮಯದಲ್ಲಿ ನಾನು ಚಾಲನಾ ಪರವಾನಿಗೆ ಹೊಂದಿರಲಿಲ್ಲ ಎಂದರೆ ಸರಿ. ಆ ದಿನ ನನ್ನ ಮೋಟರ ಸೈಕಲ್ ಗೆ ವಿಮೆ ಇರಲಿಲ್ಲ ಎಂದರೆ ಸರಿ. ಪೋಲಿಸರು ನನ್ನ ವಿರುದ್ಧ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ ಎಂದರೆ ಸರಿ. ನಾನು ನ್ಯಾಯಾಲಯದಲ್ಲಿ ತಪ್ಪು ಒಪ್ಪಿಕೊಂಡು ದಂಡ ತುಂಬಿರುತ್ತೇನೆ ಎಂದರೆ ಸರಿ. ಅಪಘಾತವು ನನ್ನ ನಿರ್ಲಕ್ಷ್ಯತನದಿಂದ ಜರುಗಿರುತ್ತದೆ, ಕಾರು ಅಪಘಾತಪಡಿಸಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರ ಮತ್ತು ಪೋಲಿಸರೊಂದಿಗೆ ಮಿಲಾಪೆಯಾಗಿ, ಒಂದು ದಿನ ತಡ ಮಾಡಿ ಕಾರಿನ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಅಪಘಾತದ ನಂತರ ನನ್ನನ್ನು ಚಿಕಿತ್ಸೆಯ ಸಲುವಾಗಿ ರಬಕವಿಯ ಮೇತ್ರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಸದರಿ ಆಸ್ಪತ್ರೆಯಲ್ಲಿ 6 ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದು ಸುಮಾರು ಒಂದು ಲಕ್ಷ ರೂಪಾಯಿ ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮುಂದಿನ ಚಿಕಿತ್ಸೆಗಾಗಿ ಸುಮಾರು 50 ಸಾವಿರ ರೂಪಾಯಿ ಬೇಕಾಗುತ್ತದೆ ಎಂದು ಯಾವುದೇ ದಾಖಲೆ ಹಾಜರಪಡಿಸಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳಿಂದ ನನಗೆ ಯಾವುದೇ ಕೆಲಸ ಮಾಡಲು ಬರುವುದಿಲ್ಲ, ಗಾಯಗಳಿಂದ ನೋವು ಅನುಭಸುತ್ತಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಯಾವುದೇ ಶಾಶ್ವತ ಅಂಗನ್ಯೂನ್ಯತೆ ಉಂಟಾಗಿಲ್ಲ ಎಂದರೆ ಸರಿಯಲ್ಲ. ಅಪಘಾತ ಪೂರ್ವದಲ್ಲಿ ಒಕ್ಕಲುತನ ಕೆಲಸದಿಂದ ನಾನು ತಿಂಗಳಿಗೆ 25 ಸಾವಿರ ರೂಪಾಯಿ ಸಂಪಾದನೆ ಮಾಡುತ್ತಿದ್ದೆನು ಎಂದು ದಾಖಲೆಗಳನ್ನು

ಹಾಜರಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ-6 ರಿಂದ 16 ರ ದಾಖಲೆಗಳನ್ನು ಪ್ರಕರಣಕ್ಕೆ ಬೇಕಾಗುವ ರೀತಿಯಲ್ಲಿ ತಯಾರಿಸಿಕೊಂಡು ಹಾಜರಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-20 ಮತ್ತು 21 ರ ಆಸ್ತಿಗಳಿಗೆ ನಾನೇ ಸಂಪೂರ್ಣ ಮಾಲೀಕ ಅಲ್ಲ ಎಂದರೆ ಸರಿಯಲ್ಲ. ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಅಂತಾ ಒಪ್ಪಿರುವರು.

ASHAPPA Digitally signed by ASHAPPA Date: 2026.03.13 17:14:01 +0530

ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಪ್ರ.ದ.ನ್ಯಾದಂ.ಗಳು, ಬನಹಟ್ಟಿ